ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 10/04/2019

# ಶಾಸಕ ಸೇರಿ ಐವರ ಬಲಿ

## ಛತ್ತೀಸ್‌ಗಢದಲ್ಲಿ ನಕ್ಸಲರ ಅಟ್ಟಹಾಸ



ರಾಯ್ಪುರ: ಲೋಕಸಭೆ ಚುನಾವಣೆಗೆ ಕೇವಲ ಎರಡು ದಿನ ಬಾಕಿ ಇರುವಾಗಲೇ ಛತ್ತೀಸ್‌ಗಢದಲ್ಲಿ ನಕ್ಸಲರು ಅಟ್ಟಹಾಸ ಮೆರೆದಿದ್ದು, ಐಇಡಿ ಸ್ಫೋಟಿಸಿ ಬಿಜೆಪಿ ಶಾಸಕ ಹಾಗೂ ಐವರು ಪೊಲೀಸ್ ಸಿಬ್ಬಂದಿಯನ್ನು ಬಲಿ ಪಡೆದಿದ್ದಾರೆ.

ಛತ್ತೀಸ್‌ಗಢದ ನಕ್ಸಲ್‌ಪೀಡಿತ ಬಸ್ತೇವಾರದ ಶ್ಯಾಮಗಿರಿ ಅರಣ್ಯಪ್ರದೇಶದಲ್ಲಿ ನಕ್ಸಲರು ಐಇಡಿ ಸ್ಫೋಟಿಸಿದ್ದು, ದಾಳಿಯಲ್ಲಿ ದಂತೇವಾಡದ ಶಾಸಕ ಭೀಮಾ ಮಾಂಡವಿ(40) ಸೇರಿ ಆರು ಮಂದಿ ಮೃತಪಟ್ಟಿದ್ದಾರೆ. ರಾಜಧಾನಿ ರಾಯ್ಪುರದಿಂದ 350 ಕಿಮೀ ದೂರದಲ್ಲಿ ಕೃತ್ಯ ನಡೆದಿದೆ.

ನಕ್ಸಲ್‌ಪೀಡಿತ ಪ್ರದೇಶದಲ್ಲಿ ಬಿಗಿ ಭದ್ರತೆಯೊಂದಿಗೆ ಚುನಾವಣಾ ಪ್ರಚಾರಕ್ಕಾಗಿ ಭೀಮಾ ಮಾಂಡವಿ ತೆರಳುತ್ತಿದ್ದಾಗ, ನಕ್ಸಲರು ಸುಧಾರಿತ ಸ್ಫೋಟಕ ಬಳಸಿ ಪ್ರಯಾಣಿಸುತ್ತಿದ್ದ ಕಾರನ್ನು ಸ್ಫೋಟಿಸಿದ್ದಾರೆ. ಸ್ಫೋಟದ ತೀವ್ರತೆಗೆ ವಾಹನ ಗಾಳಿಯಲ್ಲಿ 25 ಅಡಿಗಳಷ್ಟು ಮೇಲಕ್ಕೆ ಹಾರಿ ತುಂಡು ತುಂಡಾಗಿ ಬಿದ್ದಿದ್ದಾಗಿ ಹೇಳಲಾಗಿದೆ. ಘಟನೆಯಲ್ಲಿ ಶಾಸಕರು ಹಾಗೂ ಅವರ ಬೆಂಗಾವಲು ಪಡೆಯ ಐವರು ಪೊಲೀಸರು ಸ್ಥಳದಲ್ಲೇ ಹುತಾತ್ಮರಾಗಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿರುವ ಛತ್ತೀಸ್‌ಗಢದ ಡಿಜಿಪಿ ಡಿ.ಎಂ.ಅವಸ್ತಿ, ಭದ್ರತಾಪಡೆಗಳು ಸ್ಥಳಕ್ಕೆ ಧಾವಿಸಿದ್ದು ಗುಂಡಿನ ಚಕಮಕಿ ಮುಂದುವರಿದಿದೆ ಎಂದಿದ್ದಾರೆ. ಘಟನೆಯನ್ನು ಮಾಜಿ ಸಿಎಂ ಡಾ.ರಮಣಸಿಂಗ್ ಖಂಡಿಸಿದ್ದಾರೆ.

4